ಟಿಇಟಿ – ಸಿಇಟಿ ಕಾರ್ಯಗಾರ 2022-23

ಹುಬ್ಬಳ್ಳಿ: ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ದಿನಾಂಕ: 10/05/2022 ರಂದು ಟಿಇಟಿ – ಸಿಇಟಿ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿತ್ತು. UNACADEMY ವತಿಯಿಂದ ರಮೇಶ ಹಾಗೂ ಪ್ರಶಾಂತ ಅವರು ಟಿಇಟಿ – ಸಿಇಟಿ ಪರೀಕ್ಷೆಗಳ ಬಗ್ಗೆ ಮಾಹಿತಿಯನ್ನು ನೀಡಿದರು ಮತ್ತು UNACADEMY ಉಚಿತ ತರಗತಿಗಳ ಬಗ್ಗೆ ತಿಳಿಸಿದರು. ಪ್ರಾಚಾರ್ಯರಾದ ಡಾ. ಲಿಂಗರಾಜ ಸಿ ಮುಳ್ಳಳ್ಳಿ ಅವರು ಕಾರ್ಯಕ್ರಮದ ಮಹತ್ವವನ್ನು ತಿಳಿಸಿ ಅದರ ಸದುಪಯೋಗವನ್ನು ಪಡೆಯುವಂತೆ ಮಕ್ಕಳಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು. ಈ ಕಾರ್ಯಕ್ರಮವನ್ನು ಪ್ರಶಿಕ್ಷಣಾರ್ಥಿಳು ಸಂಘಟಿಸಿ ನೇರವೇರಿಸಿಕೊಟ್ಟರು.